# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1078 |
| ಸದಸ್ಯರ ಹೆಸರು | ಶ್ರೀ ಎ. ವಸಂತ ಕುಮಾರ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 25-08-2026 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಲ್ಯಾಣ ಕರ್ನಾಟಕದ ಕೃಷಿ ಪ್ರಧಾನ ಜಿಲ್ಲೆಗಳಾದ ರಾಯಚೂರು ಸೇರಿದಂತೆ ಇತರೆ ಜಿಲ್ಲೆಗಳಲ್ಲಿ ರೈತರ ಕೃಷಿ ವೆಚ್ಚ ಕಡಿಮೆ ಮಾಡಿ, ಬೆಳೆ ಉತ್ಪಾದಕತೆ ಹೆಚ್ಚಿಸುವ ಉದ್ದೇಶದಿಂದ ಕೃಷಿ ಡ್ರೋನ್ ಮತ್ತು Artificial Intelligence ಆಧಾರಿತ ಬೆಳೆ, ಕೀಟ-ರೋಗಗಳ ಆರಂಭಿಕ ಪತ್ತೆ, ನಿಖರ ಕೀಟನಾಶಕ ಸಿಂಪಡಣೆ, ನೀರಿನ ನಿರ್ವಹಣೆ ಹಾಗೂ ಬೆಳೆ ಹಾನಿ ಅಂದಾಜು ವ್ಯವಸ್ಥೆಯನ್ನು ಗ್ರಾಮ ಮಟ್ಟಕ್ಕೆ ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; | • ಕೃತಕ ಬುದ್ಧಿಮತ್ತೆ ಹಾಗೂ ಜಿಯೋ ಸ್ಪೇಷಿಯಲ್ ಕ್ಷೇತ್ರದಲ್ಲಿ ಆಗುತ್ತಿರುವ ಆವಿಷ್ಕಾರಗಳನ್ನು ಕೃಷಿ ಕ್ಷೇತ್ರದಲ್ಲಿ ಅಳವಡಿಸುವ ಸಂಬಂಧ ಕೃಷಿ ಸೇವೆಗಳ ಕೇಂದ್ರವನ್ನು ಸ್ಥಾಪಿಸಿ, ಪ್ರಾದೇಶಿಕ ದೂರ ಸಂವೇದಿ ಕೇಂದ್ರ, ಇಸ್ರೋ, ಮಾರತ್‌ಹಳ್ಳಿ, ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ, ಬೆಂಗಳೂರು ರವರ ಸಂಯುಕ್ತಾಶ್ರಯದಲ್ಲಿ ಈ ಕೆಳಕಂಡ ಉದ್ದೇಶಗಳೊಂದಿಗೆ ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲಾಗುತ್ತಿದೆ<br>➢ ಬೆಳೆ ದಾಸ್ತಾನು (ಬೆಳೆ ಪ್ರದೇಶ ಮತ್ತು ಉತ್ಪಾದನೆಯ ಅಂದಾಜು): ಕೊಪ್ಪಳ ಜಿಲ್ಲೆಯಲ್ಲಿ ಶೇಂಗಾ ಬೆಳೆಯ ಪ್ರದೇಶ ಮತ್ತು ಉತ್ಪಾದನೆಯ ಅಂದಾಜು<br>➢ ಡಿಜಿಟಲ್ ಮಣ್ಣು ನಕ್ಷೆ ತಯಾರಿಕೆ (pH, EC ಮತ್ತು ESP): ಕೊಪ್ಪಳ ಜಿಲ್ಲೆಯ ತುಂಗಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ 1:10,000 (ನಕ್ಷೆಯ ಪ್ರಮಾಣ) ಡಿಜಿಟಲ್ ಮಣ್ಣು ನಕ್ಷೆ ತಯಾರಿಸುವುದು.<br>➢ ಕೀಟಗಳು ಮತ್ತು ರೋಗಗಳು: ಕಲಬುರಗಿ ಜಿಲ್ಲೆಯಲ್ಲಿ ತೊಗರಿ ಬೆಳೆಗೆ ಕೀಟ ಮತ್ತು ರೋಗ ಬಾಧೆಯ ಮುನ್ಸೂಚನೆ.<br>➢ ಭತ್ತದ ನಂತರ ಪಾಳು (Fallow) ಪ್ರದೇಶಗಳ ಮೌಲ್ಯಮಾಪನ: ಬಳ್ಳಾರಿ ಜಿಲ್ಲೆಯಲ್ಲಿ ಭತ್ತದ ನಂತರ ಪಾಳು (Fallow) ಪ್ರದೇಶಗಳ ಮೌಲ್ಯಮಾಪನ.<br>• ಕಬ್ಬು ಬೆಳೆಯಲ್ಲಿ ಕೃತಕ ಬುದ್ಧಿಮತ್ತೆ (AI) ತಂತ್ರಜ್ಞಾನ ಅಳವಡಿಸಲು ಸಕ್ಕರೆ ಕಾರ್ಖಾನೆಗಳ ಸಹಯೋಗದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಖಾಸಗಿ ಸಂಸ್ಥೆಯ ಸಹಯೋಗದಲ್ಲಿ ರಾಜ್ಯದ ಕಲಬುರಗಿ ಜಿಲ್ಲೆಯ ಆಳಂದ ತಾಲ್ಲೂಕಿನಲ್ಲಿ ಪ್ರಾಯೋಗಿಕವಾಗಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಆಳಂದ ತಾಲ್ಲೂಕಿನಲ್ಲಿ 750 ಎಕರೆ ಕಬ್ಬು ಪ್ರದೇಶದಲ್ಲಿ AI ತಂತ್ರಜ್ಞಾನವನ್ನು ಅಳವಡಿಸಲಾಗುತ್ತದೆ. ಈ ತಂತ್ರಜ್ಞಾನದ ಮೂಲಕ ರೈತರಿಗೆ |

| | | |
|---|---|---|
| | | ನೀರು ಮತ್ತು ರಸಗೊಬ್ಬರಗಳ ವೈಜ್ಞಾನಿಕ ನಿರ್ವಹಣೆ ಕುರಿತು ನಿಖರವಾದ ತಾಂತ್ರಿಕ ಸಲಹೆಗಳನ್ನು ನೀಡಲಾಗುತ್ತದೆ. ಇದರಿಂದ ನೀರಿನ ಮತ್ತು ರಸಗೊಬ್ಬರಗಳ ಸಮರ್ಪಕ ಬಳಕೆ, ಉತ್ಪಾದನಾ ವೆಚ್ಚ ಕಡಿತ ಹಾಗೂ ಕಬ್ಬಿನ ಉತ್ಪಾದಕತೆ ಹೆಚ್ಚಳಕ್ಕೆ ಸಹಕಾರಿಯಾಗಲಿದೆ.<br>ದೂರ ಸಂವೇದಿ ತಂತ್ರಜ್ಞಾನ, ಡ್ರೋನ್ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ (AI), ಜಿಯೋಸ್ಪೇಷಿಯಲ್ ಅನಲಿಟಿಕ್ಸ್ ಮತ್ತು ಇತರ ಆಧುನಿಕ ಡಿಜಿಟಲ್ ತಂತ್ರಜ್ಞಾನಗಳನ್ನು ಬಳಸಿಕೊಂಡು ರೈತರಿಗೆ ಕೃಷಿ/ತೋಟಗಾರಿಕೆ/ರೇಷ್ಮೆ/ಪಶು ವೈದ್ಯಕೀಯ ಮತ್ತು ಇತರೆ ಸಂಬಂಧಿತ ಸಲಹಾ ಸೇವೆ ಬಲಪಡಿಸಲು, ಬೆಳೆಗಳ ಮೇಲ್ವಿಚಾರಣೆ ಕೈಗೊಳ್ಳಲು ಮತ್ತು ನಿರ್ಧಾರ ತೆಗೆದುಕೊಳ್ಳುವ ವ್ಯವಸ್ಥೆಗಳನ್ನು ಸುಧಾರಿಸಲು ಮುಖ್ಯಮಂತ್ರಿ ರೈತ ಚೈತನ್ಯ – ಕರ್ನಾಟಕ ಅಗ್ರಿಟೆಕ್ ಮಿಷನ್ ಅನ್ನು 2026-27ನೇ ಸಾಲಿನಿಂದ ಜಾರಿಗೆ ತರಲಾಗುತ್ತಿದೆ. |
| ಆ | ರಾಯಚೂರು ಜಿಲ್ಲೆಯಲ್ಲಿ ಇದನ್ನು ಪ್ರಾಯೋಗಿಕವಾಗಿ Pilot Project ಆಗಿ ಆರಂಭಿಸಲಾಗುವುದೇ: | 2026-27ನೇ ಸಾಲಿನಲ್ಲಿ ಮುಖ್ಯಮಂತ್ರಿ ರೈತ ಚೈತನ್ಯ – ಕರ್ನಾಟಕ ಅಗ್ರಿಟೆಕ್ ಮಿಷನ್ ಅಡಿ ರಾಯಚೂರು ಜಿಲ್ಲೆಯಲ್ಲಿ ಆಧುನಿಕ ತಂತ್ರಜ್ಞಾನ ಆಧಾರಿತ ಸಲಹಾ ಸೇವೆ ಒದಗಿಸಲು ಕ್ರಮ ಕೈಗೊಳ್ಳಲಾಗುವುದು |
| ಇ | ಸಣ್ಣ ಮತ್ತು ಅತಿ ಸಣ್ಣ ರೈತರು ಡ್ರೋನ್ ಸೇವೆಯನ್ನು ಉಚಿತವಾಗಿ ಅಥವಾ ಸಹಾಯಧನದೊಂದಿಗೆ ಪಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಡ್ರೋನ್ ಸೇವೆಯನ್ನು ರಾಜ್ಯದಲ್ಲಿ ಉಪಯೋಗಿಸಿಕೊಳ್ಳಲು ಕೃಷಿ ವಿಶ್ವವಿದ್ಯಾನಿಲಯಗಳಿಂದ ಸಂಶೋಧನೆ ಮಟ್ಟದಲ್ಲಿ ಇರುವುದರಿಂದ ಹಾಗೂ ಕೇಂದ್ರ ಸರ್ಕಾರದಿಂದ ನಿರ್ದಿಷ್ಟ ಮಾರ್ಗಸೂಚಿಗಳ ಕೊರತೆಯಿಂದ ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಸಹಾಯಧನದೊಂದಿಗೆ ಡ್ರೋನ್ ಸೇವೆಯನ್ನು ಒದಗಿಸಿರುವುದಿಲ್ಲ. |

ಸಂಖ್ಯೆ: AGRI/221/ACT/2026

P. M. Narendraswamy

**(ಪಿ. ಎಂ. ನರೇಂದ್ರ ಸ್ವಾಮಿ)**

ಕೃಷಿ ಸಚಿವರು